# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/ 01 /2021-22. ದಿನಾಂಕ : 05-04-2021.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 03-04-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ, ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 9964177663 |
| 5 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 6 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 7 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 8 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ:-03-04-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ, ಎಂ.ಎಂ.ವಿ. ರಸ್ತೆಯಲ್ಲಿ "Pedestrain Hump" ಹಾಕಿಕೊಡುವಂತೆ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರಿಂದ ಮಾಹಿತಿ ಪಡೆದ ನಂತರ ಸದರಿ ರಸ್ತೆಯು ವಾರ್ಡ್ ವ್ಯಾಪ್ತಿಯ ರಸ್ತೆಗಳಿಗೆ ಒಳಪಡುವುದರಿಂದ ಈ ರಸ್ತೆಯಲ್ಲಿ "Pedestrain Hump" ಅನ್ನು ಮಾಡಲು ಅವಕಾಶವಿರುವುದಿಲ್ಲ ಎಂಬ ಅಂಶವನ್ನು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಶ್ರದ್ಧಾನಂದ ಭವನ ರಸ್ತೆಯಲ್ಲಿ ರಸ್ತೆ ಬದಿಯಲ್ಲಿ ಹಳೆಯ ವಾಹನಗಳಿದ್ದು ಅವುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯವನ್ನೇ ಪುನಃ ಪ್ರಸ್ತಾಪಿಸಿ ಈ ಬಗ್ಗೆ ಆದಷ್ಟು ಬೇಗ ಕ್ರಮವಹಿಸುವಂತೆ ಸಭೆಯಲ್ಲಿ ಕೋರಿದರು. ಈ ಬಗ್ಗೆ ವಿ.ವಿ.ಪುರಂ ಟ್ರಾಫಿಕ್ ಪೊಲೀಸ್ ರವರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಪುನಃ ಮಾತನಾಡಿ, ಈ ನಡುವೆ ಕೋವಿಡ್-19 ಸೋಂಕು ಅತಿಯಾಗಿ ಹರಡುತ್ತಿದ್ದು, ಈ ಸಂದರ್ಭದಲ್ಲಿ ಮಾರ್ಕೆಟ್ ರಸ್ತೆ (Food street) ಯಲ್ಲಿ ಸಂಜೆ ವೇಳೆ ಬರುವ ಗ್ರಾಹಕರು ಸಾಮಾಜಿಕ ಅಂತರ ಮತ್ತು ಮಾಸ್ಕ್ ಧರಿಸದೇ ಓಡಾಡುತ್ತಿದ್ದು, ಇದರಿಂದಾಗಿ ಕೋವಿಡ್-19 ಸೋಂಕು ಬಹುಬೇಗ ಹರಡುವ ಸಂಭವವಿರುತ್ತದೆಂದು ತಿಳಿಸಿ ಸಾಮಾಜಿಕ ಅಂತರ ಮತ್ತು ಮಾಸ್ಕ್‌ಗಳನ್ನು ಧರಿಸುವುದನ್ನು ಕಡ್ಡಾಯವಾಗಿ ಸಾರ್ವಜನಿಕರು ಪಾಲಿಸುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಕೂಡಲೇ ಸೂಕ್ತ ಕ್ರಮ ವಹಿಸುವಂತೆ ಚಿಕ್ಕಪೇಟೆ ವಿಭಾಗದ ಆರೋಗ್ಯಾಧಿಕಾರಿಯವರನ್ನು ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಎಂ.ಎಂ.ವಿ.ರಸ್ತೆಯಲ್ಲಿ ಈ ಹಿಂದಿನ ಸಭೆಗಳಲ್ಲಿ ಕೋರಿದ್ದಂತೆ ಡಾಂಬರೀಕರಣ ಕಾಮಗಾರಿ ಮಾಡಲಾಗಿತ್ತು, ಆದರೆ ಸದರಿ ರಸ್ತೆಗೆ ಬಳಿ ಬಣ್ಣದ ಪಟ್ಟಿಯನ್ನು ಗುತ್ತಿಗೆದಾರರು ಮಾಡಿರದ ಕಾರಣ ಈ ವಿಷಯವನ್ನು ವಾರ್ಡ್‌ನ ಅಭಿಯಂತರರ ಗಮನಕ್ಕೆ ತರಲಾಗಿತ್ತು. ಅದರಂತೆ ರಸ್ತೆಗೆ ಬಿಳಿ ಪಟ್ಟಿಯನ್ನು ಹಾಕುವ ಕೆಲಸವನ್ನು ಮಾಡಿರುವ ವಿಷಯವನ್ನು ಪ್ರಸ್ತಾಪಿಸಿ ಸಭೆಯಲ್ಲಿ ಪ್ರಶಂಸೆ ವ್ಯಕ್ತಪಡಿಸಿದರು.

Scanned by CamScanner

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಹಸಿಕಸ ಮತ್ತು ಒಣಕಸ ಸರಿಯಾಗಿ ವಿಂಗಡಿಸಿ ವಿಲೇವಾರಿಯಾಗುತ್ತಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹಸಿಕಸ ಮತ್ತು ಒಣಕಸವನ್ನು ಪ್ರತ್ಯೇಕವಾಗಿ ವಿಲೇವಾರಿ ಮಾಡಲು ದಿನಾಂಕ: 01-04-2021 ರಿಂದ ಹೊಸ ವ್ಯವಸ್ಥೆಯನ್ನು ಜಾರಿಗೊಳಿಸಿರುವುದನ್ನು ಸಭೆಯ ಗಮನಕ್ಕೆ ತಂದರು. ಹಸಿಕಸ ವಿಲೇವಾರಿಗಾಗಿ ಸೂರ್ಯಪ್ರಕಾಶ್ ಎಂಟರ್‌ಪ್ರೈಸಸ್ ಎನ್ನುವ ಗುತ್ತಿಗೆದಾರರನ್ನು ದಿನಾಂಕ: 01-04-2021 ರಿಂದ ನೇಮಿಸಲಾಗಿದ್ದು, ಈ ಗುತ್ತಿಗೆದಾರರು ಪ್ರತಿ ದಿನ ಮನೆ.ಮನೆಗೆ ಹೋಗಿ ಹಸಿಕಸವನ್ನು ಸಂಗ್ರಹಿಸುತ್ತಾರೆ. ಒಣಕಸವನ್ನು ಹಸಿರುದಳ ಸಂಸ್ಥೆಯವರು ವಾರದಲ್ಲಿ 02 ದಿನ ಅಂದರೆ ಬುಧವಾರ ಮತ್ತು ಶನಿವಾರಗಳಂದು ಮಾತ್ರ ಸಂಗ್ರಹಿಸುತ್ತಾರೆಂದು ಸಭೆಗೆ ತಿಳಿಸಿದರು. ಹಸಿಕಸ ಸಂಗ್ರಹಿಸುವ ಗುತ್ತಿಗೆದಾರರ ಮೊಬೈಲ್ ದೂರವಾಣಿ ಸಂಖ್ಯೆಯು 9964055766 ಆಗಿರುತ್ತದೆ. ಸಾರ್ವಜನಿಕರು ಅವಶ್ಯಕತೆ ಇದ್ದಲ್ಲಿ ಮತ್ತು ಹಸಿಕಸ ನಿರ್ವಹಣೆಯಲ್ಲಿ ವ್ಯತ್ಯಯ ಉಂಟಾದಲ್ಲಿ ಸದರಿ ದೂರವಾಣಿ ಸಂಖ್ಯೆಗೆ ಕರೆ ಮಾಡಿ ತಿಳಿಸಬಹುದೆಂದು ಸಭೆಗೆ ತಿಳಿಸಿದರು. ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಸದಸ್ಯರುಗಳಿಗೆ ತಮ್ಮ ವ್ಯಾಪ್ತಿಯ ಪ್ರದೇಶಗಳಲ್ಲಿ ಸಾರ್ವಜನಿಕರು ಇದನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಲು ಕೋರಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

5/4/2021.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

5/4/2021

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner